# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1979 |
| ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.03.2026 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೊಪ್ಪಳ ಜಿಲ್ಲೆಯಲ್ಲಿ 2024-25ನೇ ಸಾಲಿನಿಂದ ಇಲ್ಲಿಯವರೆಗೆ ಅಕ್ರಮ ಮರಳು ಸಾಗಾಣಿಕೆ ಪ್ರಕರಣ ಗಳು, ಅನಧಿಕೃತ ಗಣಿಗಾರಿಕೆ ಮತ್ತು ಖನಿಜ ಸಾಗಣೆ ಕುರಿತು ಎಷ್ಟು ಪ್ರಕರಣ ಗಳನ್ನು ದಾಖಲಿಸಲಾಗಿದೆ; ಹಾಗೂ ಎಷ್ಟು ದಂಡ ಸಂಗ್ರಹಿಸಲಾಗಿದೆ;</td>
<td rowspan="3">
ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು/ ಕಲ್ಲು ಗಣಿಗಾರಿಕೆ ಮತ್ತು ಸಾಗಾಣಿಕೆಗೆ 2024-25ನೇ ಸಾಲಿನಿಂದ ಇಲ್ಲಿಯವರೆಗೆ ಪತ್ತೆ ಹಚ್ಚಿದ ಪ್ರಕರಣಗಳು, ಸಂಗ್ರಹಿಸಲಾದ ದಂಡದ ಮೊತ್ತ ಮತ್ತು ದಾಖಲಿಸಿದ ಮೊಕದ್ದಮೆಗಳ ವಿವರ ಈ ಕೆಳಗಿನಂತಿದೆ.<br>
ಅನಧಿಕೃತ ಮರಳು ಗಣಿಗಾರಿಕೆ/ ಸಾಗಾಣಿಕೆ:
<table>
<tr><th>ಕ್ರ.ಸಂ.</th><th>ವರ್ಷ</th><th>ಪತ್ತೆಹಚ್ಚಿರುವ ಪ್ರಕರಣಗಳು</th><th>ದಾಖಲಿಸಿರುವ ಪ್ರಕರಣಗಳ ಸಂಖ್ಯೆ</th><th>ದಂಡದ ಮೊತ್ತ (ರೂ.ಲಕ್ಷಗಳಲ್ಲಿ)</th></tr>
<tr><td colspan="5">ಅನಧಿಕೃತ ಮರಳು ಗಣಿಗಾರಿಕೆ</td></tr>
<tr><td>1</td><td>2024-25</td><td>11</td><td>8</td><td>6.28</td></tr>
<tr><td>2</td><td>2025-26</td><td>24</td><td>19</td><td>38.60</td></tr>
<tr><td colspan="2">ಒಟ್ಟು</td><td>35</td><td>27</td><td>44.88</td></tr>
<tr><td colspan="5">ಅನಧಿಕೃತ ಮರಳು ಸಾಗಾಣಿಕೆ</td></tr>
<tr><td>1</td><td>2024-25</td><td>149</td><td>35</td><td>31.51</td></tr>
<tr><td>2</td><td>2025-26</td><td>144</td><td>5</td><td>49.54</td></tr>
<tr><td colspan="2">ಒಟ್ಟು</td><td>293</td><td>40</td><td>81.05</td></tr>
</table>
ಅನಧಿಕೃತ ಕಲ್ಲು ಗಣಿಗಾರಿಕೆ/ ಸಾಗಾಣಿಕೆ:
<table>
<tr><th>ಕ್ರ.ಸಂ.</th><th>ವರ್ಷ</th><th>ಪತ್ತೆಹಚ್ಚಿರುವ ಪ್ರಕರಣಗಳು</th><th>ದಾಖಲಿಸಿರುವ ಪ್ರಕರಣಗಳ ಸಂಖ್ಯೆ</th><th>ದಂಡದ ಮೊತ್ತ (ರೂ.ಲಕ್ಷಗಳಲ್ಲಿ)</th></tr>
<tr><td colspan="5">ಅನಧಿಕೃತ ಕಲ್ಲು ಗಣಿಗಾರಿಕೆ</td></tr>
<tr><td>1</td><td>2024-25</td><td>25</td><td>8</td><td>102.77</td></tr>
<tr><td>2</td><td>2025-26</td><td>04</td><td>03</td><td>03.08</td></tr>
<tr><td colspan="2">ಒಟ್ಟು</td><td>29</td><td>11</td><td>105.85</td></tr>
<tr><td colspan="5">ಅನಧಿಕೃತ ಕಲ್ಲು ಸಾಗಾಣಿಕೆ</td></tr>
<tr><td>1</td><td>2024-25</td><td>93</td><td>02</td><td>27.13</td></tr>
<tr><td>2</td><td>2025-26</td><td>76</td><td>00</td><td>21.27</td></tr>
<tr><td colspan="2">ಒಟ್ಟು</td><td>169</td><td>02</td><td>48.40</td></tr>
</table>
ಅಕ್ರಮ ಮರಳು/ ಕಲ್ಲು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು:-<br>
1. ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು/ ಕಲ್ಲು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ), ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿದೆ.<br>
2. ಸದರಿ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ. ಸದರಿ
</td></tr>
<tr><td>ಆ</td><td>ಅಕ್ರಮ ಮರಳು ಸಾಗಾಣಿಕೆ ಹಾಗೂ ಅಕ್ರಮ ಗಣಿಗಾರಿಕೆ ಯಲ್ಲಿ ಪಾಲ್ಗೊಂಡವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು;</td></tr>
<tr><td>ಇ)</td><td>ಅಕ್ರಮ ಮರಳು ಸಾಗಾಣಿಕೆ ಯಿಂದ ಸರಕಾರಕ್ಕೆ ಎಷ್ಟು ರಾಜಧನ ನಷ್ಟವಾಗಿದೆ (2023-2024 ನೇ ಸಾಲಿನಿಂದ ಇಲ್ಲಿಯವರೆಗೆ ಮಾಹಿತಿ ಒದಗಿಸುವುದು)</td></tr>
</table>

ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು/ ಕಲ್ಲು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22ರಡಿಯಲ್ಲಿ ಹಾಗೂ ಕರ್ನಾಟಕ ಉಪ ಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಾವಳಿ 1994 ರಡಿಯಲ್ಲಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

3. ಅನಧಿಕೃತ ಮರಳು / ಕಲ್ಲು ಗಣಿಗಾರಿಕೆ, ಸಾಗಾಣಿಕೆ & ದಾಸ್ತಾನು ಚಟುವಟಿಕೆಗಳಲ್ಲಿ ಪಾಲ್ಗೊಂಡಿರುವುದರಿಂದ ನಿಯಮಾನುಸಾರ ದಂಡ ವಿಧಿಸಿ ವಸೂಲಿ ಮಾಡಲಾಗಿದೆ ಹಾಗೂ ಸಂಬಂಧಪಟ್ಟ ಪೊಲೀಸ್ ಠಾಣೆ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಮತ್ತು ದಂಡವಿದಿಸಿ ಸಂಗ್ರಹಿಸಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.
4. ಜಿಲ್ಲಾ ಮರಳು / ಟಾಸ್ಕ ಫೋರ್ಸ್ (ಗಣಿ) ಸಮಿತಿಯಿಂದ ತಾಲ್ಲೂಕುವಾರು ಚಾಲಿತದಳ ತಂಡವನ್ನು ರಚಿಸಿ ಅನಧಿಕೃತ ಮರಳು / ಕಲ್ಲು ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.
5. ಅನಧಿಕೃತ ಮರಳು / ಕಲ್ಲು ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ಚಟುವಟಿಕೆಗಳನ್ನು ನಿಯಂತ್ರಿಸಲು "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಿ ಕ್ರಮ ವಹಿಸಲಾಗುತ್ತಿದೆ.
6. ಉಪ ಖನಿಜಗಳ ಸಾಗಾಣಿಕೆಗೆ ವಿಶೇಷ ರಕ್ಷಣಾತ್ಮಕ ಹಾಳೆಯಲ್ಲಿ ಪರವಾನಗಿಗಳನ್ನು ನೀಡಲಾಗುತ್ತಿದೆ
7. ಅನಧಿಕೃತ ಉಪ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು ವಾಹನಗಳಿಗೆ GPS ಅಳವಡಿಸಿ ಕೇಂದ್ರೀಕೃತವಾಗಿ ನಿಗಾವಹಿಸಲು ತಂತ್ರಾಂಶ ರೂಪಿಸಲಾಗಿದೆ.
8. 2023-24ನೇ ಸಾಲಿನಿಂದ ಅನಧಿಕೃತ ಮರಳು ಸಾಗಾಣಿಕೆಗೆ ಸಂಗ್ರಹಿಸಲಾದ ದಂಡದ ವಿವರ:

| ಕ್ರ. ಸಂ. | ವರ್ಷ | ಪತ್ತೆಹಚ್ಚಿರುವ ಪ್ರಕರಣಗಳು | ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ದಂಡದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | 2023-24 | 348 | 55 | 50.86 |
| 2 | 2024-25 | 149 | 35 | 31.51 |
| 3 | 2025-26 | 144 | 5 | 49.54 |
| ಒಟ್ಟು | | 641 | 93 | 131.90 |

ಸಂಖ್ಯೆ:ಸಿಐ-ಎಂಎಂಎನ್/138/2026

(ಎಸ್.ಎಸ್. ಮಲ್ಲಿಕಾರ್ಜುನ)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.